ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1081

ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್)

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 13-03-2020

ಕ್ರಸ	ಪ್ರಶ್ನೆ	ಉತ್ತರ
ಅ	ಮೈಸೂರಿನಿಂದ ಕೃಷ್ಣರಾಜನಗರಕ್ಕೆ ಬೆಳಿಗ್ಗೆ 6 ರಿಂದ ಮಧ್ಯಾಹ್ನ 12 ರವರೆಗೆ ಪ್ರತಿ ಅರ್ಧ ಗಂಟೆಗೆ ಒಂದರಂತೆ ಎಕ್ಸ್‌ಪ್ರೆಸ್ ಅಥವಾ ನಾನ್ ಸ್ಟಾಫ್ ಬಸ್ಸುಗಳನ್ನು ಓಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;	ಕ.ರಾ.ರ.ಸಾ.ನಿಗಮದ ವತಿಯಿಂದ ದಿನಾಂಕ: 03.02.2020ರಿಂದ ನೂತನವಾಗಿ ಮೈಸೂರು-ಕೃಷ್ಣರಾಜನಗರ ಮಾರ್ಗದಲ್ಲಿ ಪ್ರತಿ 30 ನಿಮಿಷಕ್ಕೊಂದರಂತೆ ತಡೆರಹಿತ ಸಾರಿಗೆಗಳನ್ನು ಪ್ರಾರಂಭಿಸಲಾಗಿದ್ದು, ಪ್ರತಿದಿನ ಬೆಳಿಗ್ಗೆ 06.00 ಗಂಟೆಯಿಂದ ರಾತ್ರಿ 09.00 ಗಂಟೆಯವರೆಗೆ ಕೃಷ್ಣರಾಜನಗರದಿಂದ ಮೈಸೂರಿಗೆ-34 ತಡೆರಹಿತ ಸುತ್ತುವಳಿ ಮತ್ತು ಮೈಸೂರಿನಿಂದ ಕೆ.ಆರ್.ನಗರಕ್ಕೆ 34 ತಡೆರಹಿತ ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.
ಆ	ಪ್ರತಿದಿನ ಬೆಳಿಗ್ಗೆ 6 ಗಂಟೆಯಿಂದ 12 ಗಂಟೆಯವರೆಗೆ ಕೇವಲ 12 ಬಸ್‌ಗಳು ಕಾರ್ಯಾಚರಣೆ ಮಾಡುತ್ತಿದ್ದು, ಪ್ರತಿದಿನ ಈ ವೇಳೆಯಲ್ಲಿ ಸರ್ಕಾರಿ ನೌಕರರು ಸೇರಿದಂತೆ ಸುಮಾರು 500-600 ಪ್ರಯಾಣಿಕರು ದಿನನಿತ್ಯ ಮೈಸೂರಿನಿಂದ ಕೆ.ಆರ್.ನಗರಕ್ಕೆ ಪ್ರಯಾಣಿಸುತ್ತಿದ್ದು, ಬಸ್ ಸೌಲಭ್ಯ ಇಲ್ಲದೆ ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪ್ರಸ್ತುತ ಕೆ.ಆರ್.ನಗರದಿಂದ ಮೈಸೂರಿಗೆ ಬೆಳಿಗ್ಗೆ 06.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ 89 ಸುತ್ತುವಳಿಗಳು ಕಾರ್ಯಾಚರಣೆಯಲ್ಲಿರುತ್ತದೆ (ಪ್ರತಿ ನಿಮಿಷಕ್ಕೊಂದು ಸುತ್ತುವಳಿ) ಅದೇ ರೀತಿ ಮೈಸೂರಿನಿಂದ ಕೆ.ಆರ್.ನಗರಕ್ಕೆ 76 ಸುತ್ತುವಳಿಗಳು ಕಾರ್ಯಾಚರಣೆಯಲ್ಲಿದ್ದು (ಪ್ರತಿ 6 ನಿಮಿಷಕ್ಕೊಂದು ಸುತ್ತುವಳಿ), ಸಾರ್ವಜನಿಕ ಪ್ರಯಾಣಿಕರಿಗೆ ಯಾವುದೇ ತೊಂದರೆಯುಂಟಾಗುತ್ತಿರುವುದಿಲ್ಲ.
ಇ	ಅದೇರೀತಿ ಸಂಜೆ 5 ಗಂಟೆಯಿಂದ 8 ಗಂಟೆಯವರೆಗೆ ಕೃಷ್ಣರಾಜನಗರದಿಂದ ಮೈಸೂರಿಗೆ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ?	ಕೃಷ್ಣರಾಜನಗರದಿಂದ ಮೈಸೂರಿಗೆ ಸಂಜೆ 05.00 ಗಂಟೆಯಿಂದ ರಾತ್ರಿ 08.00 ಗಂಟೆಯವರೆಗೆ 41 ಸುತ್ತುವಳಿಗಳು ಕಾರ್ಯಾಚರಣೆಯಲ್ಲಿದ್ದು, ಇವು ಸಾರ್ವಜನಿಕ ಪ್ರಯಾಣಿಕರ ಅವಶ್ಯಕತೆಗೆಅನುಗುಣವಾಗಿದೆ. ಸಾರ್ವಜನಿಕ ಪ್ರಯಾಣಿಕರು ಈ ಸಾರಿಗೆ ಸೌಕರ್ಯದ ಪ್ರಯೋಜನವನ್ನು ಪಡೆಯುತ್ತಿರುತ್ತಾರೆ.

ಸಂಖ್ಯೆ: ಟಿಡಿ 80 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು